# ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.381/2025

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಕಿರಣ್ | ಸಿಡಬ್ಲ್ಯೂ-2 |
| ತಂದೆ ಹೆಸರು | – | ಶಿವಣ್ಣ | ಪಿಡಬ್ಲ್ಯೂ-2 |
| ವಯಸ್ಸು | – | 23 ವರ್ಷ | |
| ಉದ್ಯೋಗ | – | ಕೂಲಿ | |
| ವಾಸ | – | ಉಪ್ಪಳಗೆರೆ ಗ್ರಾಮ | |

**ದಿನಾಂಕಃ 06.04.2026 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ಚಾಸಾ.1 ನನ್ನ ತಾಯಿ, ಚಾಸಾ.3 ನನ್ನ ಚಿಕ್ಕಮ್ಮ. ಚಾಸಾ.4 ರಿಂದ 6 ರವರು ಗೊತ್ತು . ಆರೋಪಿತರು ಗೊತ್ತು. ಆರೋಪಿತರು ನನಗಾಗಲೀ , ನನ್ನ ತಾಯಿಗಾಗಲೀ ಹೊಡಿ ಬಡಿ ಮಾಡಿಲ್ಲ. ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಕೋಲಿನಿಂದ ಹೊಡೆದಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ. ನಾನು ಆಸಪತ್ರೆಯಲ್ಲಿ ಚಿಕಿತ್ಸೆ ಪಡೆದಿಲ್ಲ. ಪೊಲೀಸರಿಗೆ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ಸುಮಾರು 4 ವರ್ಷಗಳಿಂದ ನಾನು ರಂಗನಾಥ ಪುರದ ವಿನಾಯಕ್ ಬಾರ್ ನಲ್ಲಿ ಸಪ್ಲೆಯರ್ ಆಗಿ ಕೆಲಸ ಮಾಡಿಕೊಂಡು ನಾನು ಅತಿಯಾಗಿ ಮದ್ಯಪಾಲ ಮಾಡುತ್ತಿದ್ದರಿಂದ ನನ್ನ ತಂದೆ ಬಾರ್ ಕೆಲಸದಿಂದ ಬಿಡಿಸಿದರು ಎಂದರೆ ಸರಿಯಲ್ಲ. ನಮ್ಮ ಗ್ರಾಮದ ಪುನೀತ್ ಕುಮಾರ್ ಕ್ಯಾಶಿಯರ್ ಆಗಿದ್ದರು ನೀನು ಕೆಲಸ ಏಕೆ ಬಿಟ್ಟಿದ್ದೀಯ ನಮ್ಮ ಬಾರಿನಲ್ಲಿ ಕೆಲಸ ಮಾಡಿಕೊಂಡು ಹೋಗು ಎಂದು ಕೆಟ್ಟ ಪದಗಳಿಂದ ನಿಂದಿಸುವುದು , ಹೊಡೆಯುವುದು ಮಾಡುತ್ತಿದ್ದರು ಎಂದರೆ

ಸರಿಯಲ್ಲ. ದಿಃ17.01.2025 ರಂದು ಸುಮಾರು 4.30 ಗಂಟೆ ಸಮಯದಲ್ಲಿ ಹಿರಿಯೂರು ತಾ. ಉಪ್ಪಳಗೆರೆ ಗ್ರಾಮದ ಅಂಗಡಿ ಕರಯಪ್ಪನವರ ಮನೆಯ ಮುಂದೆ ಆರೋಪಿತರು ಅಕ್ರಮ ಗುಂಪುಕಟ್ಟಿಕೊಂಡು ಬಂದು ಸೂಳೆ ಮಕ್ಕಳಾ ಭೋಳಿ ಮಕ್ಕಳು ಎಂದು ಅವಾಚ್ಯ ಶಬ್ದಗಳಿಂದ ಬೈದಾಡುತ್ತಿರುವಾಗ ನಾನು ಮತ್ತು ಚಾಸಾ.1 ರವರು ಆರೋಪಿತರಿಗೆ ಏಕೆ ಗಲಾಟೆ ಮಾಡುತ್ತೀರಾ ಎಂದು ಕೇಳಿದ್ದಕ್ಕೆ ಆರೋಪಿತರು ಚಾಸಾ.1 ರವರಿಗೆ ಕೈಕಾಲುಗಳಿಂದ ಮೈಕೈಗೆ ಹೊಡೆದು ನನ್ನ ಎದೆಗೆ ಮತ್ತು ಸೊಂಟಕ್ಕೆ ಹೊಡೆದು ಬಿಡಿಸಲು ಬಂದ ಚಾಸಾ.3, 4 ರವರಿಗೆ ಕೈಕಾಲುಗಳಿಂದ ಮೈಕೈಗೆ ಹೊಡೆದು , 1 ನೇ ಆರೋಪಿ ಕೋಲಿನಿಂದ ನನ್ನ ಬಲಕಣ್ಣಿಗೆ ಮತ್ತು ತಲೆಗೆ ಹೊಡೆದು ಚಾಸಾ.1 ರವರ ಕೈ ಹಿಡಿದು ಎಳೆದಾಡಿ ಸಾಮಾನ್ಯ ಸ್ವರೂಪದ ಗಾಯಮಾಡಿ ನಮ್ಮ ತಂಟೆಗೆ ಬಂದರೆ ಜೀವ ಸಹಿತ ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿದ್ದಾರೆ ಎಂದರೆ ಸರಿಯಲ್ಲ. ನಾವು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದೇವೆ ಎಂದರೆ ಸರಿಯಲ್ಲ. ಈ ರೀತಿಯಾಗಿ ನಾನು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿ ನಿರಾಕರಿಸಿದ್ದರಿಂದ ಮರು ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಈಗ ನಾವು ಮತ್ತು ಆರೋಪಿತರು ರಾಜೀ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆ ಕಾರಣದಿಂದ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಎಂ ಆರ್ ಆರ್ ವಕೀಲರಿಂದ-ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು